ಕರ್ನಾಟಕ ಸರ್ಕಾರ

ಸಂಖ್ಯೆ: ಕಸಂವಾಪ್ರ 14 ಕೆಎಂಯು 2010

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 19.04.2010

ಜಿಲ್ಲಾಧಿಕಾರಿಗಳ ಕಛೇರಿ
ಹಾಸನ ಜಿಲ್ಲೆ, ಹಾಸನ
26 APR 2010

ಸುತ್ತೋಲೆ

ವಿಷಯ: ಕರ್ನಾಟಕ ರಾಜ್ಯಾದಂತ ಅನೇಕ ಜಿಲ್ಲೆಗಳಲ್ಲಿ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್ ಇವರು ಸ್ಮಾರಕಗಳ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ಸಮಾರಂಭಗಳನ್ನು ಏರ್ಪಡಿಸುವಾಗ ಅಧಿಕಾರಿಗಳು ಭಾಗವಹಿಸುವ ಕುರಿತು.

ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್ ಇವರು ಪ್ರಾಚ್ಯವಸ್ತು ಸ್ಮಾರಕಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ ಅನೇಕ ದೇವಸ್ಥಾನಗಳ ಪುನರುಜ್ಜೀವನ ಮಾಡುವುದಕ್ಕಾಗಿ ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ ಮತ್ತು ಸಾರ್ವಜನಿಕರ ಸಹಯೋಗದೊಂದಿಗೆ ಅನೇಕ ಯೋಜನೆಗಳನ್ನು ಕೈಗೊಂಡಿರುತ್ತಾರೆ. ಸದರಿ ಯೋಜನೆಯು ಕಾರ್ಯಗತಗೊಂಡ ಮೇಲೆ ಉದ್ಘಾಟನಾ ಸಮಾರಂಭಗಳನ್ನು ಏರ್ಪಡಿಸಿದ್ದು ಅಂತಹ ಸಂದರ್ಭದಲ್ಲಿ ಸ್ಥಳೀಯ ಅಧಿಕಾರಿಗಳು ಅನುಪಸ್ಥಿತಿ ಇದ್ದು, ಸ್ಥಳೀಯ ಅಧಿಕಾರಿಗಳ ಭಾಗವಹಿಸುವಿಕೆ ಕೊರತೆ ಕಂಡು ಬರುತ್ತದೆ. ಕನಿಷ್ಠ ತಾಲ್ಲೂಕು ಮಟ್ಟದ ತಹಶೀಲ್ದಾರರು, ವಿಭಾಗ ಮಟ್ಟದ ಉಪವಿಭಾಗಾಧಿಕಾರಿಗಳು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳು ಇಲಾಖೆಯ ವಿಭಾಗದ ಉಪನಿರ್ದೇಶಕರು, ಭಾಗವಹಿಸಿದ್ದಲ್ಲಿ, ಸ್ಥಳೀಯರಲ್ಲಿ ಒಳ್ಳೆಯ ಭಾವನೆ ಮೂಡುತ್ತದೆ. ಹಾಗೂ ಕಾಮಗಾರಿಗಳ ಬಗ್ಗೆ ಆಸಕ್ತಿ ಇರುವುದನ್ನು ಸಾರ್ವಜನಿಕರು ಗಮನಿಸಬಹುದಾಗಿರುತ್ತದೆ. ಆದ್ದರಿಂದ ಅಂತಹ ಸಮಾರಂಭಗಳಲ್ಲಿ ಭಾಗವಹಿಸಲು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ತಹಶೀಲ್ದಾರರು ಹಾಗೂ ಉಪ ವಿಭಾಗಾಧಿಕಾರಿಗಳು, ಉಪನಿರ್ದೇಶಕರುಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಈ ಮೂಲಕ ಕೋರಲಾಗಿದೆ.

(ಬಿ.ಆರ್.ಜಯರಾಮರಾಜೇ ಅರಸ್) 24/4/10
ಸರ್ಕಾರದ ಕಾರ್ಯದರ್ಶಿ
ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ

31/5/10

ಗೆ:
ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ

ಸಂಡಿವಿಎನ್ (ಪ್ರ) ನಿಆರ್ 109/10-11
ಉಪ ವಿಭಾಗಾಧಿಕಾರಿಗಳು ದಾಸನ ಮತ್ತು ಸಕಲೇಶಪುರರವರಿಗೆ ಮುಂದಿನ ಕ್ರಮಕ್ಕೆ

ಅಪರ ಜಿಲ್ಲಾಧಿಕಾರಿ
ಹಾಸನ ಜಿಲ್ಲೆ, ಹಾಸನ